19 ಪ್ರಶ್ನೆಗಳಿಗೆ ಉತ್ತರಗಳನ್ನು ಮತ್ತು ಚುಕ್ಕೆ ಗುರುತಿಲ್ಲದ 18 ಪ್ರಶ್ನೆಗಳ ಉತ್ತರಗಳನ್ನು ಈ ಸಭೆಯ ಮುಂದೆ ಮಂಡಿಸುತ್ತೇನೆ.

## 23-3-94ರ ಚುಕ್ಕೆ ಗುರುತಿನ ಪ್ರಶ್ನೋತ್ತರಗಳು

**ಹೊಳೆನರಸೀಪುರದಲ್ಲಿರುವ ಪದವಿಪೂರ್ವ ಕಾಲೇಜುಗಳು**

544 - ಶ್ರೀ ಜಿ. ಪುಟ್ಟಸ್ವಾಮಿಗೌಡ (ಹೊಳೆನರಸೀಪುರ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ಹೊಳೆನರಸೀಪುರ ತಾಲ್ಲೂಕಿನಲ್ಲಿರತಕ್ಕ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು;*

*ಆ) 1993-94ರಲ್ಲಿ ಆ ತಾಲ್ಲೂಕಿನಲ್ಲಿ ಎಷ್ಟು ಸರ್ಕಾರಿ ಪದವಿ ಪೂರ್ವಕಾಲೇಜುಗಳನ್ನು ತೆರೆಯಲಾಗಿದೆ;*

*ಇ) 1994-95ರಲ್ಲಿ ಹೊಳೆನರಸೀಪುರ ತಾಲ್ಲೂಕಿನಲ್ಲಿ ಎಷ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ತೆರೆಯಲಾಗುವುದು.*

ಶ್ರೀಮತಿ ನಾಗಮ್ಮ ಸಿ. ಕೇಶವಮೂರ್ತಿ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) ಹೊಳೆನರಸೀಪುರ ತಾಲ್ಲೂಕಿನಲ್ಲಿ ಒಟ್ಟು 5 ಸರ್ಕಾರಿ ಪದವಿ ಪೂರ್ವ ಕಾಲೇಜುಗಳು ಇರುತ್ತವೆ.

ಆ) 1993-94ರಲ್ಲಿ ಆ ತಾಲ್ಲೂಕಿನಲ್ಲಿ ಯಾವುದೇ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಪ್ರಾರಂಭಿಸಿರುವುದಿಲ್ಲ.

ಇ) 1994-95ರಲ್ಲಿ ಹೊಳೆನರಸೀಪುರ ತಾಲ್ಲೂಕಿನಲ್ಲಿ ಯಾವುದೇ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಪ್ರಾರಂಭಿಸಲು ಪ್ರಸ್ತಾವನೆ ಬಂಡಿರುವುದಿಲ್ಲ. ಪ್ರಸ್ತಾವನೆ ಬಂದಲ್ಲಿ ಪರಿಶೀಲಿಸಲಾಗುವುದು.

**ಮಾಟೋಳ್ಳಿ ಮತ್ತು ಎಕ್ಕುಂಡಿ ಗ್ರಾಮಗಳಲ್ಲಿ ಮೀನುಗಾರರಿಗೆ ಮನೆಗಳ ನಿರ್ಮಾಣ**

516 - ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ) : ಮಾನ್ಯ ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ಬೆಳಗಾಂ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಕೆಂಗಾನೂರು ಹಾಗೂ ಸೌದತ್ತಿ ತಾಲ್ಲೂಕಿನ ಮಾಟೋಳ್ಳಿ ಮತ್ತು ಎಕ್ಕುಂಡಿ ಗ್ರಾಮಗಳಲ್ಲಿ ಮೀನುಗಾರರು ಮನೆಗಳನ್ನು ಕಟ್ಟುವ ಸಲುವಾಗಿ ಸೊಸೈಟಿ ಮುಖಾಂತರ ಸ್ಥಳವನ್ನು ಸರ್ಕಾರಕ್ಕೆ ಒದಗಿಸಿದ ಸಂಗತಿ ನಿಜವೇ?*

*ಆ) ಹಾಗಿದ್ದಲ್ಲಿ ಆ ಮೀನುಗಾರರಿಗೆ ಮನೆಗಳನ್ನು ಕಟ್ಟಲು ಸರ್ಕಾರದವರು ಯಾವ ಕ್ರಮವನ್ನು ಕೈಗೊಂಡಿರುವರು?*

*ಇ) ಇನ್ನು ಎಷ್ಟು ದಿವಸಗಳಲ್ಲಿ ಅವರಿಗೆ ಮನೆಗಳನ್ನು ಕಟ್ಟಲು ಕ್ರಮಕೈಗೊಳ್ಳಲಾಗುವುದು?*

*ಈ) ಸೊಸೈಟಿ ಮುಖಾಂತರ ಎಷ್ಟು ಜನ ಮೀನುಗಾರರ ಸ್ಥಳವನ್ನು ಸರ್ಕಾರಕ್ಕೆ ಮನೆಕಟ್ಟಲು ಕೊಟ್ಟಿರುವರು (ಅವರ ಹೆಸರುಗಳನ್ನು ವಿವರವಾಗಿ ನೀಡುವುದಾಗಬೇಕು)*

*ಉ) ಸರ್ಕಾರದ ನಿರ್ಲಕ್ಷತನದಿಂದ ಅಲ್ಲಿ ಮನೆಗಳನ್ನು ಕಟ್ಟಲು ವಿಳಂಬವಾಗುತ್ತಿದೆಂಬ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?*